(ಇಂದು ದಿನಾಂಕಃ 16-10-2025 ರಂದು ಸಾಕ್ಷಿದಾರರನ್ನು ಪುನಃ ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.)

**ಪಾಟೀ ಸವಾಲುಃ 2 ನೇ ಪ್ರತಿವಾದಿ ಪರಃ ಶ್ರೀ ವಿ.ಎಂ.ಕೆ. ವಕೀಲರಿಂದಃ**

ನನ್ನ ದಾವಾಪತ್ರದ 3 ನೇ ಪ್ಯಾರಾದಲ್ಲಿ ನಮ್ಮ ತಂದೆ ಶ್ರೀಪಾದರವರು 1 ನೇ ಪ್ರತಿವಾದಿ- ರಾಧಾಬಾಯಿ ಮತ್ತು ರೇಖಾಬಾಯಿ ತುಕಾರಾಮ ಪಾವಸ್ಕರ್ ಇವರಿಗೆ ತಲಾ ಎಂಟು ಸಾವಿರ ರೂಪಾಯಿ ಕೊಟ್ಟಿದ್ದರ ಬಗ್ಗೆ ದಾಖಲಾತಿಗಳು ಇವೆ ಎಂದರೆ ಸರಿ. ಆದರೆ ನಾನು ಅದನ್ನು ಪುಷ್ಟೀಕರಿಸಲು ಯಾವುದೇ ದಾಖಲಾತಿಗಳನ್ನು ಹಾಜರುಪಡಿಸಿಲ್ಲ ಎಂದರೆ ಸರಿ. 1975 ರಲ್ಲಿ ನಮ್ಮ ಕುಟುಂಬದಲ್ಲಿ ಯಾವುದೇ ಕೌಟುಂಬಿಕ ವ್ಯವಸ್ಥಾ ಪತ್ರ ಆಗಿಲ್ಲ ಎಂದರೆ ಸಾಕ್ಷಿ ಆ ಬಗ್ಗೆ ನನಗೆ ಮಾಹಿತಿ ಇಲ್ಲ ಎಂದು ಹೇಳುತ್ತಾರೆ. ರಮಾಬಾಯಿ ಮತ್ತು ರೇಖಾಬಾಯಿ ದಾವಾ ಆಸ್ತಿಯಲ್ಲಿನ ತಮ್ಮ ಪಾಲನ್ನು ಮಾರಾಟ ಮಾಡಿದ್ದು ಅದನ್ನು 1 ನೇ ಪ್ರತಿವಾದಿ ತನ್ನ ಸ್ವಂತ ಹಣದಿಂದ ಕ್ರಯಕ್ಕೆ ತೆಗೆದುಕೊಂಡಿದ್ದಾರೆ ಎಂದರೆ ಸರಿಯಲ್ಲ. 1 ನೇ ಪ್ರತಿವಾದಿಗೆ ತನ್ನದೇ ಆದ ಸ್ವಂತ ಆದಾಯ ಇದ್ದು ಅದರಿಂದ ದಾವಾಸ್ವತ್ತನ್ನು ಕ್ರಯಕ್ಕೆ ತೆಗೆದುಕೊಂಡಿದ್ದಾಳೆ ಎಂದರೆ ಸರಿಯಲ್ಲ. ದಾವಾಸ್ವತ್ತು ಜಂಟಿ ಕುಟುಂಬದ ಆಸ್ತಿ ಅಲ್ಲ, ಆದರೆ ಅದು 1 ನೇ ಪ್ರತಿವಾದಿಯ ಸ್ವಯಾರ್ಜಿತ ಆಸ್ತಿ ಎಂದರೆ ಸರಿಯಲ್ಲ. 2 ನೇ ಪ್ರತಿವಾದಿಯ ಪ್ರಚೋದನೆಯ ಮೇರೆಗೆ 1 ನೇ ಪ್ರತಿವಾದಿ ದಿನಾಂಕ 29-09-2011 ರಂದು ಮಾಡಿದಂತಹ ಮೃತ್ಯಪತ್ರವನ್ನು ರದ್ದುಗೊಳಿಸಿ ದಿನಾಂಕ 18-10-2019 ರಂದು ಹೊಸ ಮೃತ್ಯುಪತ್ರವನ್ನು ಮಾಡಿಕೊಂಡಿದ್ದಾರೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಮತ್ತು ನನ್ನ ಸಹೋದರ 1 ನೇ ಪ್ರತಿವಾದಿಯನ್ನು ಸರಿಯಾಗಿ ನೋಡಿಕೊಳ್ಳದೇ ಇರುವುದರಿಂದ 1 ನೇ ಪ್ರತಿವಾದಿ ತನ್ನ ಸ್ವಇಚ್ಛೆಯಿಂದ 18-10-2019 ರಂದು 2 ನೇ ಪ್ರತಿವಾದಿಗೆ ಮೃತ್ಯುಪತ್ರ ಬರೆದುಕೊಟ್ಟಿದ್ದಾರೆ ಎಂದರೆ ಸರಿಯಲ್ಲ. 1 ನೇ ಪ್ರತಿವಾದಿ, 2 ನೇ ಪ್ರತಿವಾದಿಗೆ ದಾನಪತ್ರವನ್ನು ದಿನಾಂಕ 16-06-2022 ರಂದು ಬರೆದುಕೊಟ್ಟಿದ್ದಾರೆ ಎಂದರೆ ಸರಿ, ಸಾಕ್ಷಿ ಮುಂದುವರಿದು ಸದರಿಯವರು ಖುಷಿಯಿಂದ ಬರೆದುಕೊಟ್ಟಿಲ್ಲ ಎಂದು ಹೇಳುತ್ತಾರೆ. 2 ನೇ ಪ್ರತಿವಾದಿ 1 ನೇ ಪ್ರತಿವಾದಿಗೆ ತಿಂಗಳಿಗೆ ರೂ. 3,000-00 ಔಷದೋಪಚಾರ ಕೊಡುತ್ತಿದ್ದರು ಮತ್ತು 1 ನೇ ಪ್ರತಿವಾದಿಯನ್ನು 2 ನೇ ಪ್ರತಿವಾದಿ ನೋಡಿಕೊಳ್ಳುತ್ತಿದ್ದಾರೆ ಎಂದರೆ ಸರಿಯಲ್ಲ. ಸುಮಾರು 15 ವರ್ಷಗಳಿಂದ ಮಾಡಿಕೊಂಡು ಬಂದಿದ್ದಾರೆ ಎಂದರೆ ಸರಿಯಲ್ಲ. 2 ನೇ ಪ್ರತಿವಾದಿಗೆ ಮದುವೆ ಕಾಲಕ್ಕೆ ಸಾಕಷ್ಟು ಚಿನ್ನದ

ಆಭರಣಗಳನ್ನು ಕೊಟ್ಟಿದ್ದೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. 2 ನೇ ಪ್ರತಿವಾದಿ ದಾವಾಸ್ವತ್ತಿನ ಮಾಲಿಕಳಾಗಿದ್ದರಿಂದ ಇನ್ನುಳಿದ ಪ್ರತಿವಾದಿಯರು ಪಾಲು ವಿಭಾಗ ಕೇಳಲು ಬರುವುದಿಲ್ಲ ಎಂದರೆ ಸರಿಯಲ್ಲ. ನಾನು ಕೇಳಿರುವ ಪರಿಹಾರಕ್ಕೆ ಸರಿಯಾದ ನ್ಯಾಯಾಲಯದ ಶುಲ್ಕ ಕಟ್ಟಿಲ್ಲ ಎಂದರೆ ನನಗೆ ಗೊತ್ತಿಲ್ಲ. ದಾವಾಸ್ವತ್ತಿನಲ್ಲಿ ನನಗೆ ಯಾವುದೇ ಹಕ್ಕಿಲ್ಲ ಅನ್ನುವುದು ಸರಿಯಲ್ಲ.

**ಪಾಟೀ ಸವಾಲುಃ** 3, 4, 6, 7 ವಕೀಲರು ಹಾಜರಿದ್ದು ಪಾಟೀ ಸವಾಲಿಗೆ ಸಮಾಯಾವಕಾಶ ಕೋರಿದ್ದು ಯಾವುದೇ ಸಕಾರಣ ಇಲ್ಲದಿರುವುದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರು ವಿಚಾರಣೆ – ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು)

ಓ.ಹೇ.ಕೇ. ಸರಿ ಇದೆ.

ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಕಾರವಾರ